ಕರ್ನಾಟಕ ಸರ್ಕಾರ

# ಮೀನುಗಾರಿಕೆ ನಿರ್ದೇಶನಾಲಯ

3ನೇ ಮಹಡಿ, ಪೋಡಿಯಂ ಬ್ಲಾಕ್, ವಿಶ್ವೇಶ್ವರಯ್ಯ ಕೇಂದ್ರ, ಡಾ|| ಬಿ. ಆರ್. ಅಂಬೇಡ್ಕರ್ ವೀಧಿ, ಬೆಂಗಳೂರು – 560 001

ದೂ : 080 - 2286 4681/4604 ಫ್ಯಾಕ್ಸ್ : 080 - 2286 4619 ಇಮೇಲ್ : dof-blr-ka@nic.in

**ಸಂಖ್ಯೆ DOF TECHOVEHICLE/53/2021 E-** **ದಿನಾಂಕ: 25-06-2021**

## ಜ್ಞಾಪನಾ ಪತ್ರ

**ವಿಷಯ**: ತಾಲ್ಲೂಕು ಮಟ್ಟದ ಅಧಿಕಾರಿಗಳಿಗೆ ಹೊರಗುತ್ತಿಗೆ ವಾಹನ ಪಡೆಯಲು ಅನುಮತಿ ನೀಡುವ ಬಗ್ಗೆ.

********

ಮೇಲಿನ ವಿಷಯಕ್ಕೆ ಸಂಬಂಧಿಸಿದಂತೆ ಸರ್ಕಾರವು ತಾಲ್ಲೂಕು ಮಟ್ಟದ ಅಧಿಕಾರಿಗಳಿಗೆ ಇಲಾಖೆ ಕಾರ್ಯಕ್ರಮಗಳನ್ನು ಅನುಷ್ಠಾನ ಮಾಡಲು ಹಾಗೂ ವಿಸ್ತರಣಾ ಚಟುವಟಿಕೆಗಳನ್ನು ಕೈಗೊಂಡು ರೈತರಿಗೆ ಮೀನುಕೃಷಿ ಮಾಡಲು ಅನುವಾಗಲು ವಾಹನಗಳನ್ನು ಹೊರಗುತ್ತಿಗೆ ಮೂಲಕ ಪಡೆಯಲು ಅನುಮತಿ ನೀಡಲಾಗಿತ್ತು. ಸದರಿ ವಾಹನಗಳಿಗೆ ಪ್ರತಿ ವರ್ಷ ಕೇಂದ್ರ ಕಚೇರಿಯಿಂದ ಅನುಮತಿ ನೀಡಲಾಗುತ್ತಿದ್ದು, ಇನ್ನು ಮುಂದೆ ಎಲ್ಲಾ ಜಿಲ್ಲಾಮಟ್ಟದ ಅಧಿಕಾರಿಗಳು ತಮ್ಮ ಹಂತದಲ್ಲಿ ಈ ಕೆಳಕಂಡ ಷರತ್ತಿಗೆ ಒಳಪಟ್ಟು ಅನುಮತಿ ನೀಡಲು ತಿಳಿಸಲಾಗಿದೆ.

1. ಜಿಲ್ಲಾ ಮಟ್ಟದ ಅಧಿಕಾರಿಗಳು ತಾಲ್ಲೂಕು ಮಟ್ಟದ ಅಧಿಕಾರಿಗಳ ಪ್ರತಿ ಮಾಹೆಯ ತಾತ್ಕಲಿಕ ಪ್ರವಾಸ ಪಟ್ಟಿ ಹಾಗೂ ಅಂತಿಮ ಪ್ರವಾಸ ಪಟ್ಟಿಗಳನ್ನು ಪಡೆದು ಪರಿಶೀಲಿಸಿ ಅಗತ್ಯತೆಗೆ ಅನುಗುಣವಾಗಿ ವಾಹನವನ್ನು ಒದಗಿಸತಕ್ಕದು.
2. ಅನಗತ್ಯವಾಗಿ ಉಪಯೋಗಿಸುತ್ತಿರುವ ವಾಹನಗಳನ್ನು ತಕ್ಷಣದಿಂದ ರದ್ದುಪಡಿಸಿ ಸರ್ಕಾರದ ಬೊಕ್ಕಸಕ್ಕೆ ನಷ್ಟವಾಗದಂತೆ ಕ್ರಮವಹಿಸತಕ್ಕದು.
3. ಯೋಜನೆಗಳನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸಲು ವಿಫಲವಾದ ಅಧಿಕಾರಿಗಳ ವಾಹನಗಳನ್ನು ಹಿಂಪಡೆಯತಕ್ಕದು.
4. ವಾಹನಗಳನ್ನು ಕಚೇರಿ ಕೆಲಸ ಮತ್ತು ಯೋಜನೆ/ಇಲಾಖಾ ಕಾರ್ಯಕ್ರಮಗಳಿಗೆ ಮಾತ್ರ ಉಪಯೋಗಿಸತಕ್ಕದು.
5. ಹೊರಗುತ್ತಿಗೆ ವಾಹನ ಪಡೆಯಲು ಜಿಲ್ಲಾ ಪಂಚಾಯತ್ ಅನುಮೋದನೆಯನ್ನು ತಪ್ಪದೇ ಪಡೆಯತಕ್ಕದು.
6. ಸದರಿ ವಾಹನಗಳ ವೆಚ್ಚವನ್ನು ಜಿಲ್ಲಾ ಪಂಚಾಯತ್ ಯೋಜನೆಯಡಿ ಲಭ್ಯವಿರುವ ಅನುದಾನದಲ್ಲಿ ಮಾತ್ರ ಉಪಯೋಗಿಸತಕ್ಕದು.
7. ಎಲ್ಲಾ ಹೊರಗುತ್ತಿಗೆ ವಾಹನಗಳನ್ನು ಕರ್ನಾಟಕ ಪಾರದರ್ಶಕ ಅಧಿನಿಯಮದ ಪ್ರಕಾರ ಪಡೆಯತಕ್ಕದ್ದು.

ಸಹಿ/-

ಮೀನುಗಾರಿಕೆ ನಿರ್ದೇಶಕರು

ಗೆ:

ಎಲ್ಲಾ ಜಿಲ್ಲಾಮಟ್ಟದ ಮೀನುಗಾರಿಕೆ ಅಧಿಕಾರಿಗಳಿಗೆ

ಪ್ರತಿ: ಎಲ್ಲಾ ವಲಯ ಮಟ್ಟದ ಅಧಿಕಾರಿಗಳಿಗೆ ಮಾಹಿತಿಗಾಗಿ

ಪ್ರತಿ: ಎಲ್ಲಾ ತಾಲ್ಲೂಕು ಮಟ್ಟದ ಅಧಿಕಾರಿಗಳಿಗೆ ಸೂಕ್ತ ಕ್ರಮಕ್ಕಾಗಿ

ಮೀನುಗಾರಿಕೆ ನಿರ್ದೇಶಕರ ಪರವಾಗಿ